ಮುಖ್ಯವಾಗಿ ಪೋಲೀಸ್ ಪೇದೆಗಳು ಮತ್ತು ಮುಖ್ಯ ಪೇದೆಗಳಿಗೆ ಹಂಚಿಕೆಯಾಗಿದ್ದು, ಇವುಗಳ ನಿರ್ವಹಣೆ ಮತ್ತು ದುರಸ್ತಿ ಮಾಡುವಲ್ಲಿ ಲೆಕ್ಕಶೀರ್ಷಿಕೆ 2055 ಪೋಲೀಸ್ ವಸತಿಗೃಹ ಅಡಿಯಲ್ಲಿ ರೂ. 36.00 ಲಕ್ಷಗಳ ಅನುದಾನ ಲಭ್ಯವಿರುವುದು ಗಮನಕ್ಕೆ ಬಂದಿದೆ. ಈ ಅನುದಾನವನ್ನು ಲೋಕೋಪಯೋಗಿ ಇಲಾಖೆಗೆ ಒದಗಿಸಲು ಕೋರಿದೆ. ಈ ಕಾಮಗಾರಿಗಳನ್ನು ಲೋಕೋಪಯೋಗಿ ಇಲಾಖೆ ವತಿಯಿಂದ ಕೂಡಲೇ ಕೈಗೊಳ್ಳಲಾಗುವುದು.

ಶಿಡ್ಲಘಟ್ಟ ತಾಲ್ಲೂಕಿನಲ್ಲಿ ಪಶುವೈದ್ಯಕೀಯ ಆಸ್ಪತ್ರೆಗಳ ಕಟ್ಟಡಗಳು.

560: (3915)

ಶ್ರೀ ವಿ.ಮುನಿಯಪ್ಪ (ಶಿಡ್ಲಘಟ್ಟ): ಮಾನ್ಯ ಪಶುಸಂಗೋಪನಾ ರಾಜ್ಯ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿಡ್ಲಘಟ್ಟ ತಾಲ್ಲೂಕು ಬಸ್ಸೆಟ್ಟಿಹಳ್ಳಿ ಗ್ರಾಮ ಪಂಚಾಯತಿ ಕೇಂದ್ರದಲ್ಲಿ ಸ್ಥಳೀಯ ನಿವಾಸಿಗಳೊಬ್ಬರು ಪಶುವೈದ್ಯಕೀಯ ಆಸ್ಪತ್ರೆಗೆ ನೂತನ ಕಟ್ಟಡವನ್ನು ದಾನದ ರೂಪದಲ್ಲಿ ಕಟ್ಟಿಸಿ ಕೊಟ್ಟಿರುವುದು ಸರಕಾರದವರ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಅಲ್ಲಿ ಪಶುವೈದ್ಯ ಆಸ್ಪತ್ರೆಯನ್ನು ಪ್ರಾರಂಭ ಮಾಡಲು ಬೇಡಿಕೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ?

ಇ) ಬಂದಿದ್ದಲ್ಲಿ ಅದನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಬಿ.ಬಿ.ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು):

ಅ) ಹೌದು

ಆ) ಹೌದು

ಇ) 98-99 ಸಾಲಿನಲ್ಲಿ ಪರಿಗಣಿಸಲಾಗುವುದು.

ಗೌರಿಬಿದನೂರಿನಲ್ಲಿ ಜ್ಯೂಡಿಷಿಯಲ್ ನ್ಯಾಯಾಲಯ ಕಟ್ಟಡದ ನಿರ್ಮಾಣ.

561:(4027)

ಶ್ರೀಮತಿ ಎನ್.ಜ್ಯೋತಿರೆಡ್ಡಿ (ಗೌರಿಬಿದನೂರು): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗೌರಿಬಿದನೂರು ತಾಲ್ಲೂಕಿನಲ್ಲಿ ಜ್ಯಡಿಷಿಯಲ್ ನ್ಯಾಯಾಲಯ ಕಟ್ಟಡದ ನಿರ್ಮಾಣ ಯಾವಾಗ ಪೂರ್ಣಗೊಂಡಿದೆ; ಹಾಗಿದ್ದಲ್ಲಿ ಯಾವಾಗ ಪೂರ್ಣಗೊಳಿಸಲಾಗುವುದು?

ಆ) ಎಷ್ಟು ಹಣವನ್ನು ಮಂಜೂರು ಮಾಡಲಾಗಿದೆ?

ಇ) ಆ ಬಗ್ಗೆ ಇದುವರೆಗೆ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ?

ಶ್ರೀ ಸಿ.ಎಂ.ಉದಾಸಿ (ಲೋಕೋಪಯೋಗಿ ಸಚಿವರು):

ಅ) ಈ ಕಟ್ಟಡವು ಇನ್ನು ಪೂರ್ಣಗೊಂಡಿರುವುದಿಲ್ಲ. ಈ ಕಟ್ಟಡದ ಕಾಮಗಾರಿಯನ್ನು ಮಾರ್ಚ್ 1999ರ ಒಳಗೆ ಪೂರ್ಣಗೊಳಿಸಲಾಗುವುದು.

ಆ) ರೂ.40 ಲಕ್ಷಗಳು ಮಂಜೂರಾಗಿದೆ.

ಇ) ಸೆಪ್ಟೆಂಬರ್ 98ರ ವರೆಗೆ ರೂ.23.83 ಲಕ್ಷಗಳು ಬಿಡುಗಡೆಯಾಗಿದೆ.

ದಾವಣಗೆರೆಯಲ್ಲಿ ಕ್ರೀಡಾಂಗಣ ಮತ್ತು ಈಜು ಕೊಳದ ನಿರ್ಮಾಣ.

562: (4020)

ಶ್ರೀ ಎನ್.ಎಸ್.ಮಲ್ಲಿಕಾರ್ಜುನ, (ದಾವಣಗೆರೆ): ಮಾನ್ಯ ಯುವಜನ ಸೇವೆ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ದಾವಣಗೆರೆಯಲ್ಲಿ ಜಿಲ್ಲಾ ಕ್ರೀಡಾಂಗಣ ನಿರ್ಮಾಣ ಹಾಗೂ ಈಜುಕೊಳ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ?

ಆ) ಹಾಗಿದ್ದಲ್ಲಿ, ಯಾವಾಗ ಅವುಗಳಿಗೆ ಮಂಜೂರಾತಿ ಮಾಡಿ ನಿರ್ಮಿಸಲಾಗುವುದು? (ವಿವರ ನೀಡುವುದು)

ಶ್ರೀ ನಾಗಪ್ಪ ಸಾಲೋನಿ (ಯುವಜನ ಸೇವೆ ಮತ್ತು ಕ್ರೀಡಾ ರಾಜ್ಯ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.